**2 ನೇ ಹೆಚ್ಚುವರಿ ಪ್ರಥಮ ದರ್ಜೆಯ  ನ್ಯಾಯಿಕ ದಂಡಾಧಿಕಾರಿಯವರ**

**ನ್ಯಾಯಾಲಯ, ನಂಜನಗೂಡು**

**ಸಿ.ಸಿ 1659/2019 ಸಿ. ಡಬ್ಲ್ಯೂಃ 03**

**ಪಿ. ಡಬ್ಲ್ಯೂಃ 01**

| | |
|---|---|
| ಸಾಕ್ಷಿದಾರರ ಹೆಸರು | ಕೃಷ್ಣಕುಮಾರ್ |
| ತಂದೆ/ಗಂಡನ ಹೆಸರು | ಕೃಷ್ಣೆಗೌಡ |
| ವಯಸ್ಸು | 57 ವರ್ಷ |
| ಕೆಲಸ | ವ್ಯವಸಾಯ |
| ವಾಸ | ಸಿಂದುವಳ್ಳಿಪುರ ಗ್ರಾಮ ನಂಜನಗೂಡು ತಾ. |
| | **ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ** 20-08-2025 |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ವಕೀಲರಿಂದಃ**

ನನಗೆ ಮೃತ ವೆಂಕಟರಾಮೇಗೌಡರ ಪರಿಚಯ ಇರುತ್ತದೆ. ಚಾಸಾ-1,2,4 ಮತ್ತು 5 ರವರ ಪರಿಚಯ ಇರುತ್ತದೆ.

ಸಾಕ್ಷಿಗೆ ಒಂದು ದಾಖಲೆ ತೋರಿಸಿದ್ದು ಅದು ಸ್ಥಳ ಮಹಜರಾಗಿದ್ದು ಆಗಿದ್ದು ಅದನ್ನು ಈಗ ಅದನ್ನು ನಿಪಿ-1 ಎಂದು, ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಮತ್ತೊಂದು ದಾಖಲೆ ತೋರಿಸಿದ್ದು ಅದು ಶವತನಿಖಾ ವರದಿ ಆಗಿದ್ದು ಅದನ್ನು ಈಗ ಅದನ್ನು ನಿಪಿ-2 ಎಂದು, ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ನಿಪಿ-1 ಮತ್ತು 2 ಕ್ಕೆ ಸುಮಾರು 5 ವರ್ಷಗಳ ಹಿಂದೆ ಪೊಲೀಸರ ಕೋರಿಕೆ ಮೇರೆಗೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಪೋಲೀಸರು ನನ್ನ ಸಮಕ್ಷಮ ಯಾವುದೇ ಸ್ಥಳ ಮಹಜರು ಕ್ರಮ

ಜರುಗಿಸಿರುವುದಿಲ್ಲ, ಮತ್ತು ಯಾವುದೇ ಶವಪಂಚನಾಮೆಯನ್ನು ಜರುಗಿಸಿರುವುದಿಲ್ಲ. ಈ ಪ್ರಕರಣದ ವಿದ್ಯಮಾನ ಗೊತ್ತಿಲ್ಲ.

(ಸಸಅ ಅವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿಸಲು ಅನುಮತಿಯನ್ನು ಕೋರಿದ್ದು ಅನುಮತಿಯನ್ನು ನೀಡಲಾಯಿತು)

**<u>ಪಾಟೀ ಸವಾಲುಃ ಮಾನ್ಯ ಎಪಿಪಿ ಯವರಿಂದ</u>**

ದಿಃ 08-06-2019 ರಂದು ಪೋಲೀಸರು ನನ್ನನ್ನು ಚಾಸಾ-5 ರವರನ್ನು ಬರಮಾಡಿಕೊಡಯಿ ಈ ಕೇಸಿನ ವಿದ್ಯಾಮಾನ ತಿಳಿಸಿ ಪಂಚರಾಗಲು ಕೋರಿಕೊಂಡು ಎಂದರೆ ಸರಿಯಲ್ಲ ಅದಕ್ಕೆ ನಾವು ಒಪ್ಪಿದ ಮೇರೆಗೆ ಚಾಸಾ-1 ರವರು ಅಪಘಾತವನ್ನು ಸ್ಥಳವನ್ನು ತೋರಿಸಿಕೊಟ್ಟ ಮೇರೆಗೆ ಮಧ್ಯಾಹ್ನ 3-30 ಗಂಟೆಯಿಂದ 4 ಗಂಟೆಯವರೆಗೆ ನಿಪಿ-1 ರಂತೆ ಸ್ಥಳ ಮಹಜರು ಕ್ರಮ ಜರುಗಿಸಿ ಸ್ಥಳದಲ್ಲಿ ನನ್ನ ಮತ್ತು ಚಾಸಾ-1 ಮತ್ತು 5 ರವರ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ದಿ.09-06-2019 ರಂದು ಪೋಲೀಸರು ನನ್ನನ್ನು ಮತ್ತು ಚಾಸಾ-4 ಮತ್ತು 5 ರವರನ್ನು ಮೈಸೂರಿನ ಜೆ ಎಸ್ ಎಸ್ ಆಸ್ಪತ್ರೆ ಸರ್ಕಾರಿ ಮೆಡಿಕಲ್ ಕಾಲೇಜು ಶವಾಗಾರದಲ್ಲಿ ಮೃತ ವೆಂಕಟರಾಮೇಗೌಡ ರವರ ಬಾಬ್ತು ಶವ ಪಂಚನಾಮೆಯನ್ನು ಬೆಳಗ್ಗೆ 8 ಗಂಟೆಯಿಂದ 10 ಗಂಟೆಯವರಿಗೆ ನಿಪಿ-2 ರಂತೆ ಶವಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ ಮತ್ತು ಸ್ಥಳದಲ್ಲಿ ನನ್ನ ಮತ್ತು ಚಾಸಾ-4 ಮತ್ತು 5 ರವರ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ನಿಪಿ-1 ಮತ್ತು 2 ರಲ್ಲಿ ಬರೆದಿರುವ ವಿಚಾರ ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ . ಹೇ. ಕೇ. ಸರಿ. ಇದೆ

2 ನೇ ಕಿ.ಪ್ರ.ದ. ನ್ಯಾ ದಂ. ನಂಜನಗೂಡು